**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಣೇಬೆನ್ನೂರು.**

**CC No. 47/2025**

| | | | |
|---|---|---|---|
| ಸಾಕ್ಷಿದಾರರ ಹೆಸರು | : ಹೆಗ್ಗಪ್ಪ ನೀಲಪ್ಪ ದೊಡ್ಡಮನಿ | | ***C.W- 14*** |
| ತಂದೆಯ ಹೆಸರು | : ನೀಲಪ್ಪ | | ***P.W- 12*** |
| ವಯಸ್ಸು | : 55 ವರ್ಷ | | |
| ಉದ್ಯೋಗ | : ಪಿ ಎಸ್ ಐ ರಾಣೇಬೆನ್ನೂರು ಶಹರ ಪೋಲಿಸ್ ಠಾಣೆ . | | |
| ವಾಸ | : ರಾಣೇಬೆನ್ನೂರು. | | |

**ದಿನಾಂಕಃ 22-07-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸರ್ಕಾರಿ ಸಹಾಯಕ ಅಭಿಯೋಜಕರವರಿಂದಃ**

ನಾನು 2023 ರಿಂದ ಇಲ್ಲಿಯವರೆಗೂ ರಾಣೆಬೆನ್ನೂರ ಶಹರ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ ಕಾರ್ಯ ನಿರ್ವಹಿಸುತ್ತಿದ್ದೇನೆ .

ದಿಃ 17-10-2024 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಸಂಜೆ 6.45 ಗಂಟೆಯ ಸುಮಾರಿಗೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ಪಿರ್ಯಾದಿಯನ್ನು ದಾಖಲಿಸಿಕೊಂಡು ಠಾಣಾ ಗುನ್ನ ನಂಃ 213/2024 ರಂತೆ ಪ್ರಕರಣ ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮೂಲ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೂ ಹಾಗೂ ಪ್ರತಿಗಳನ್ನು ಮೇಲಾಧಿಕಾರಿಗಳಿಗೂ ನಿವೇದಿಸಿಕೊಂಡಿರುತ್ತೇನೆ. ಸದರಿ ದೂರನ್ನು ಈಗಾಗಲೆ ನಿಪಿ-1 ಎಂದು ಗುರುತಿಸಲಾಗಿದ್ದು ಶರ ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಮತ್ತು 1(ಸಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ-15 ಎಂದು ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು.

ದಿಃ 18-10-2024 ರಂದು ಸಾಕ್ಷಿದಾರರಾದ ಚಾಸಾ-4 ರಿಂದ 11 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿಃ 19-10-2024 ರಂದು ಘಟನಾ ಸ್ಥಳವಾದ ಮಂಗಳಾ ಸೀಡ್ಸ ಅಂಗಡಿ ಹತ್ತಿರ ಬೇಟಿ ನೀಡಿ ಇಬ್ಬರು ಪಂಚರನ್ನು ಹಾಜರು ಪಡಿಸಿಕೊಂಡು ಅವರ ಸಮಕ್ಷಮ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ 1.40 ಗಂಟೆಯಿಂದ 2.25

ಗಂಟೆಯವರೆಗೆ ನಿಪಿ–2 ರಂತೆ ಮಹಜರ್ ತಯಾರಿಸಿ ನಿಪಿ–3 ರಂತೆ ಭಾವಚಿತ್ರ ತೆಗೆದಿರುತ್ತೇನೆ. ನಿಪಿ–2 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–2(ಡಿ) ಎಂದು ಗುರುತಿಸಲಾಯಿತು. ಸ್ಥಳದಲ್ಲಿ ಕಚ್ಚಾ ನಕಾಶೆಯನ್ನು ಸಹ ತಯಾರಿಸಿರುತ್ತೇನೆ. ನಂತರ ಅದೇ ದಿನ ಗಂಗಾಪುರ ರೈಲ್ವೆ ಗೇಟ್ ಹತ್ತಿರ ಸರ್ಕಾರಿ ಜಾಗದಲ್ಲಿ ಚಾಸಾ–1 ರವರು ತೋರಿಸಿದ ಸ್ಥಳದಲ್ಲಿ ಪಂಚರಾದ ಚಾಸಾ–2 ಮತ್ತು 3 ರವರ ಸಮಕ್ಷಮ ಮದ್ಯಾಹ್ನ 2.45 ರಿಂದ 3.30 ರವರಗೆ ನಿಪಿ–4 ರಂತೆ ಸ್ಥಳ ಪಂಚನಾಮೆ ತಯಾರಿಸಿ ಕಚ್ಚಾ ನಕಾಶೆ ತಯಾರಿಸಿ ನಿಪಿ–5 ಮತ್ತು 6 ರಂತೆ ಭಾವಚಿತ್ರ ತೆಗೆದಿರುತ್ತೇನೆ. ನಿಪಿ–4 ರಲ್ಲಿರುವ ಸಾಕ್ಷಿ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ–4(ಡಿ) ಎಂದು ಗುರುತಿಸಲಾಯಿತು. ಭಾವಚಿತ್ರಗಳ ಬಗ್ಗೆ ಸಿಡಿಯನ್ನು ಸಹ ತಯಾರಿಸಿದ್ದು ಅದನ್ನು ನಿಪಿ–16 ಎಂದು ಗುರುತಿಸಲಾಯಿತು. ಅದೆ ದಿನ ಭಾವಚಿತ್ರ ತೆಗೆದ ಬಗ್ಗೆ ಚಾಸಾ–12 ರವರಿಂದ ಕಲಂ 65(ಬಿ) ಸಾಕ್ಷ್ಯ ಅಧಿನಿಯಮದಡಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ–17 ಎಂದು ಸಾಕ್ಷಿಯ ಸಹಿಯನ್ನು ನಿಪಿ–17(ಎ) ಎಂದು ಗುರುತಿಸಲಾಯಿತು.

ದಿಃ 27–11–2024 ರಂದು ಆರೋಪಿತರು ಮಾನ್ಯ ನ್ಯಾಯಾಲಯದಿಂದ ಜಾಮೀನು ಪಡೆದುಕೊಂಡು ಬಂದು ಠಾಣೆಗೆ ಹಾಜರಾಗಿದ್ದು ಅವರನ್ನು ದಸ್ತಗಿರಿ ಮಾಡಿ ದಸ್ತಗಿರಿ ನಿಯಮ ಪಾಲಿಸಿ ಜಾಮೀನಿನ ಮೇಲೆ ಬಿಡುಗಡೆಗೊಳಿಸಿರುತ್ತೇನೆ. ದಿಃ 05–12–2024 ರಂದು ಚಾಸಾ–1 ರವರ ಗಾಯದ ಪ್ರಮಾಣ ಪತ್ರವನ್ನು ಸಾರ್ವಜನಿಕ ಆಸ್ಪತ್ರೆ ರಾಣೇಬೆನ್ನೂರು ಅವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣ ಪತ್ರವನ್ನು ನಿಪಿ–18 ಎಂದು ಸಾಕ್ಷಿಯ ಸಹಿಯನ್ನು ನಿಪಿ–18(ಎ) ಎಂದು ಗುರುತಿಸಲಾಯಿತು.

ಆರೋಪಿತರ ವಿರುದ್ದ ಸಾಕಷ್ಟು ಸಾಕ್ಷ್ಯಾಧಾರಗಳು ಲಭ್ಯವಾಗಿದ್ದರಿಂದ ತನಿಖೆಯನ್ನು ಮುಕ್ತಾಯ ಗೊಳಿಸಿ ದಿಃ 06–12–2024 ರಂದು ಆರೋಪಿತರ ವಿರುದ್ದ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ . ಸಾಕ್ಷಿ ನ್ಯಾಯಾಲಯದ ಮುಂದೆ ಹಾಜರಿರುವ 1 ರಿಂದ 3 ನೆ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ. ಸಿ ಯು ಕೆ ವಕೀಲರಿಂದಃ**

1. ದಿಃ 17–10–2024 ರಂದು ಚಾಸಾ–1 ರವರು ಠಾಣೆಗೆ ಹಾಜರಾಗಿ ಗಣಕೀಕೃತ ಪಿರ್ಯಾದಿ ನೀಡಿರುತ್ತಾರೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಪಿರ್ಯಾದಿ ಆದಾರದ ಮೇಲೆ ನಮ್ಮ ಠಾಣಾ ಗುನ್ನ ನಂಃ 213/2024 ರಂತೆ ಪ್ರಕರಣ

ದಾಖಲಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಂತರ ದಿಃ 18-10-2024 ರಂದು ಚಾಸಾ-4 ರಿಂದ 11 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ದಿಃ 19-10-2024 ರಂದು ಚಾಸಾ-2 ಮತ್ತು 3 ರವರ ಸಮಕ್ಷಮ ನಿಪಿ-2 ಮತ್ತು 4 ರಂತೆ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಪಂಚನಾಮೆ ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪಂಚನಾಮೆಯ ಕಾಲಕ್ಕೆ ಭಾವಚಿತ್ರ ತೆಗೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ-12 ರವರ ಕಡೆಯಿಂದ ಒಂದು ಖೊಟ್ಟಿ ಪ್ರಮಾಣ ಪತ್ರ ಸೃಷ್ಠಿ ಮಾಡಿ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ಅನುಕೂಲವಾಗಲಿ ಎಂದು ಖೊಟ್ಟಿ ಗಾಯದ ಪ್ರಮಾಣ ಪತ್ರ ಸೃಷ್ಠಿ ಮಾಡಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ದೂರಿನಲ್ಲಿ ಹೇಳಿದ ಹಾಗೆ ಯಾವುದೆ ಘಟನೆ ನಡೆಯದೆ ಇದ್ದರೂ ಸಹ ಅಂಕಿ ಸಂಖ್ಯೆಗೋಸ್ಕರಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/-

2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.